**1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ವಿಶೇಷ ನ್ಯಾಯಾಲಯ, ಬಳ್ಳಾರಿ**

**ಸತ್ರ ಮೊಕದ್ದಮೆ ಸಂಖ್ಯೆಃ- 30/2024**

**ಪ್ರಾಸಾಃ- 3 ಚಾಸಾಃ- 2**

| | | |
|---|---|---|
| ಸಾಕ್ಷಿಯ ಹೆಸರು | : | ಕೃಷ್ಣ |
| ತಂದೆಯ ಹೆಸರು | : | ಈರಣ್ಣ |
| ವಯಸ್ಸು | : | 26 ವರ್ಷ |
| ವೃತ್ತಿ | : | ಆಟೋ ಚಾಲಕ |
| ವಾಸಸ್ಥಳ | : | ದೇಶನೂರು ಗ್ರಾಮ |

**ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ- 18.6.2026**
**ಮುಖ್ಯ ವಿಚಾರಣೆಃ ವಿಶೇಷ ಅಭಿಯೋಜಕರಿಂದ**

ಚಾಸಾ 1, 4 ಮತ್ತು 5 ನನ್ನ ಅಣ್ಣಂದಿರು. ಚಾಸಾ 3 ನನ್ನ ಅಣ್ಣನ ಮಗ. ಚಾಸಾ ಚಾಸಾ 8 ನನ್ನ ಅಣ್ಣನ ಹೆಂಡತಿ. ಉಳಿದ ಸಾಕ್ಷಿದಾರರ ಪರಿಚಯ ಇದೆ. ಈಗ ನ್ಯಾಯಾಲಯದ ಮುಂದೆ ವಿ ಸಿ ಮೂಲಕ ಹಾಜರಾಗಿರುವ ಆರೋಪಿ ನಮ್ಮ ಊರಿನವರೇ. ನಮ್ಮ ತಾಯಿ ತಾಯವ್ವ ಈಗ ಜೀವಂತ ಇಲ್ಲ. ನಮ್ಮ ತಾಯಿ ಹೇಗೆ ತೀರಿಕೊಂಡರು ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಆಸ್ಪತ್ರೆಗೆ ಹೋದ ನಂತರ ಗೊತ್ತಾಯಿತು. ಆರೋಪಿ ನಮ್ಮ ಹೆಣ್ಣು ಮಕ್ಕಳ ಮೇಲೆ ಕೆಟ್ಟ ದೃಷ್ಟಿಯಿಂದ ನೋಡುತ್ತಿರಲಿಲ್ಲ ಮತ್ತು ನನ್ನ ತಾಯಿ ಸಾವಿಗೂ ಮತ್ತು ಆರೋಪಿಗೂ ಸಂಬಂಧ ಇಲ್ಲ. ಆ ಬಗ್ಗೆ ನಾನು ಪೋಲೀಸರಿಗೆ ಹೇಳಿಕೆ ಕೊಟ್ಟಿಲ್ಲ. ಈ ಕೇಸಿನ ಬಗ್ಗೆ ನನಗೇನು ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಮತ್ತು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಪ್ರಾಜ್ಞ ಅಭಿಯೋಜಕರು ಕೋರಿದ್ದು, ಕೋರಿಕೆ ಸಕಾರಣಗಳಿಂದ ಕೂಡಿದ್ದರಿಂದ ಅದನ್ನು ಪುರಸ್ಕರಿಸಲಾಗಿದೆ ಮತ್ತು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಮತ್ತು ಪಾಟೀ ಸವಾಲು ಮಾಡಲು ಪ್ರಾಜ್ಞ ಅಭಿಯೋಜಕರಿಗೆ ಅನುಮತಿ ನೀಡಲಾಯಿತು).**

**<u>ಪಾಟೀ ಸವಾಲುಃ ಅಭಿಯೋಜಕರವರಿಂದಃ</u>**

ಈಗ ಓದಿ ಹೇಳಿದಂತೆ ದಿಃ 15-1-2024 ರಂದು ಪೋಲೀಸರು ನನ್ನನ್ನು ವಿಚಾರಿಸಿದಾಗ " ನಾನು ---- ಪೋಲೀಸ್ ಠಾಣೆಯಲ್ಲಿ ದೂರು ನೀಡಿದೆನು “ ಎನ್ನುವ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ಸದರಿ ಹೇಳಿಕೆಯಲ್ಲಿ ಹೇಳಿರುವಂತೆ ಆರೋಪಿಯು ನಮ್ಮ ಮನೆಯ ಎದುರುಗಡೆ ಇದ್ದು ಯಾವಾಗಲೂ ನಮ್ಮ ಹೆಣ್ಣು ಮಕ್ಕಳನ್ನು ಕೆಟ್ಟ ದೃಷ್ಟಿಯಿಂದ ನೋಡುತ್ತಿದ್ದ ಆ ವಿಚಾರದಲ್ಲಿ ಕೇಳಿದಾಗ ಜಗಳ ಆಗಿ ನಮ್ಮ ಮೇಲೆ ದ್ವೇಷ ಹೊಂದಿದ್ದರು ಎಂದರೆ ಸರಿಯಲ್ಲ. ದಿಃ 12-1-2024 ರಂದು ಬೆಳಗಿನಜಾವ ನನ್ನ ತಾಯಿ ಚಾಸಾ 3 ರವರ ಜೊತೆ ಮೂತ್ರ ವಿಸರ್ಜನೆಗೆ ಹೋದಾಗ ಆರೋಪಿ ನನ್ನ ತಾಯಿಗೆ ಹಾರೆಯಿಂದ ಹೊಡೆದು ಕೊಲೆ ಮಾಡಿದ ವಿಚಾರ ನನಗೆ ಗೊತ್ತಾಗಿದ್ದು ಅದನ್ನು ತಿಳಿದುಕೊಂಡು ನಿಪಿ-9 ರಂತೆ ಹೇಳಿಕೆ ಕೊಟ್ಟಿದ್ದರೂ ಸಹ ಈಗ ಆರೋಪಿ ಜೊತೆ ರಾಜಿ ಮಾಡಿಕೊಂಡು ಕೇಸಿನಲ್ಲಿ ಆತನಿಗೆ ಸಹಾಯ ಆಗಲಿ ಎಂದು ಸುಳ್ಳು ಸಾಕ್ಷಿ ಹೇಳಲು ಬಂದಿದ್ದೇನೆ ಎಂದರೆ ಸರಿಯಲ್ಲ.

ಈಗ ತೋರಿಸಿದ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಪೋಟೋದಲ್ಲಿ ನಾನು ಕಾಣಿಸುತ್ತೇನೆ. ಬಟ್ಟೆ ಜಪ್ತು ಪಂಚನಾಮೆಯನ್ನು ನಿಪಿ-10 ಎಂದು ಹಾಗೂ ಸಾಕ್ಷಿಯ ಹೆಬ್ಬೆಟ್ಟಿನ ಗುರುತನ್ನು ನಿಪಿ-10(ಎ) ಎಂದು ಮತ್ತು ಪೋಟೋವನ್ನು ನಿಪಿ-11 ಎಂದು ಗುರುತಿಸಲಾಯಿತು. ನನ್ನ ಬಟ್ಟೆಗಳನ್ನು ಪೋಲೀಸರಿಗೆ ಆಸ್ಪತ್ರೆಗೆ ಕೊಟ್ಟಿದ್ದೇನೆ. ಆ ಸಂದರ್ಭದಲ್ಲಿ ನಿಪಿ-10 ರ ಪಂಚನಾಮೆ ಬರೆದು ನಿಪಿ-11 ರ ಪೋಟೋ ತೆಗೆಯಲಾಯಿತು ಎಂದರೆ ಸರಿಯಲ್ಲ. ನಾನು ಸಿರುಗುಪ್ಪ ನ್ಯಾಯಾಲಯಕ್ಕೆ ಹೋಗಿ ಹೇಳಿಕೆ ಕೊಟ್ಟಿರುವುದಿಲ್ಲ. ಈಗ ತೋರಿಸಿದ ಹೇಳಿಕೆ ನನ್ನದಲ್ಲ. ಆ ಹೇಳಿಕೆಯನ್ನು ನಿಪಿ-12 ಎಂದು ಗುರುತಿಸಲಾಯಿತು. ನಿಪಿ-12 ರಂತೆ ದಿಃ 2-2-2024 ರಂದು ನಾನು ಸ್ವಯಂ ಆಗಿ ಸಿರುಗುಪ್ಪ ನ್ಯಾಯಾಲಯಕ್ಕೆ ಹೋಗಿ ಪ್ರಮಾಣ ವಚನದ ಮೂಲಕ ನನ್ನ ಹೆಳಿಕೆಯನ್ನು ಕೊಟ್ಟಿದ್ದರೂ ಸಹ ಈಗ ಆರೋಪಿ ಜೂತೆ ಶಾಮಿಲಾಗಿ ಸದರಿ ಹೇಳಿಕೆಯನ್ನು ಸಹ ಉದ್ದೇಶಪೂರ್ವಕವಾಗಿ ತಿರಸ್ಕಾರ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯೇ ನನ್ನ ತಾಯಿಯನ್ನು ಹೊಡೆದು ಕೊಲೆ

ಮಾಡಿರುವ ವಿಚಾರ ಸತ್ಯವಾಗಿದ್ದರೂ ಸಹ ಅದೇ ಸಂಬಧರ್ಭದಲ್ಲಿ ನಾನು ಗಾಯಗೊಂಡಿದ್ದರೂ ಸಹ ಈಗ ಆರೋಪಿಯೊಂದಿಗೆ ಶಾಮೀಲಾಗಿ ಕೇಸಿನಲ್ಲಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳಲು ಬಂದಿದ್ದೇನೆ ಎಂದರೆ ಸರಿಯಲ್ಲ.

ನಿಪಿ-**12** ಹೇಳಿಕೆಯನ್ನು ಪರೀಶಿಲನೆ ಮಾಡಿದ ನಂತರ ವಿಜಯಾಸಿಂಗ್ ಪ್ರಕರಣದಲ್ಲಿ ಹೇಳಿರುವಂತೆ ಮತ್ತು ಕಾನೂನು ಪ್ರಕಾರ ಈ ಸಾಕ್ಷಿ ವಿರುದ್ಧ ಫರ್ಜುರಿ ಕೇಸು ದಾಖಲಿಸುವ ಬಗ್ಗೆ ಮಾನ್ಯ ಪಿಪಿ ರವರು ಕ್ರಮ ತೆಗೆದುಕೊಳ್ಳಬೇಕೆಂದು ಸೂಚಿಸಲಾಯಿತು.

ಈಗ ತೋರಿಸಿದ ಪ್ಯಾಂಟು ನಾನು ಹಾಜರು ಪಡಿಸಿದ ವಸ್ತುಗಳು ಎಂದರೆ ಸರಿಯಲ್ಲ. ಅವುಗಳನ್ನು ಕ್ರಮವಾಗಿ ಮು ಮಾ 5 ಮತ್ತು 6 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಬಿ ಕೆ ವಕೀಲರಿಂದಃ

ಪಾಟೀ ಸವಾಲು ಇಲ್ಲ ಎಂದು ಹೇಳಿದ್ದಾರೆ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು).**

**ಓ. ಹೇ. ಕೆ. ಸರಿ ಇದೆ.**

**1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ವಿಶೇಷ ನ್ಯಾಯಾಲಯ, ಬಳ್ಳಾರಿ.**

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ವಿಶೇಷ ನ್ಯಾಯಾಲಯ, ಬಳ್ಳಾರಿ

ಸತ್ರ ಮೊಕದ್ದಮೆ ಸಂಖ್ಯೆ:- 30/2024

ಪ್ರಾಸಾಃ- 4 ಚಾಸಾಃ- 4

| | | |
|---|---|---|
| ಸಾಕ್ಷಿಯ ಹೆಸರು | : | ಶರಣ ಬಸವ |
| ತಂದೆಯ ಹೆಸರು | : | ಲೇಟ್ ಈರಣ್ಣ |
| ವಯಸ್ಸು | : | 35 ವರ್ಷ |
| ವೃತ್ತಿ | : | ಕೂಲಿ |
| ವಾಸಸ್ಥಳ | : | ದೇಶನೂರು ಗ್ರಾಮ |

**ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ- 18.6.2026**

**ಮುಖ್ಯ ವಿಚಾರಣೆಃ ವಿಶೇಷ ಅಭಿಯೋಜಕರಿಂದ**

ಚಾಸಾ 1 ಮತ್ತು 5 ನನ್ನ ಅಣ್ಣಂದಿರು. ಚಾಸಾ 2 ನನ್ನ ತಮ್ಮ. ಚಾಸಾ ಚಾಸಾ 8 ನನ್ನ ಅಣ್ಣನ ಹೆಂಡತಿ. ಉಳಿದ ಸಾಕ್ಷಿದಾರರ ಪರಿಚಯ ಇದೆ. ಈಗ ನ್ಯಾಯಾಲಯದ ಮುಂದೆ ವಿ ಸಿ ಮೂಲಕ ಹಾಜರಾಗಿರುವ ಆರೋಪಿ ನಮ್ಮ ಊರಿನವರೇ. ನಮ್ಮ ತಾಯಿ ತಾಯವ್ವ ಈಗ ಜೀವಂತ ಇಲ್ಲ. ನಮ್ಮ ತಾಯಿ ಹೇಗೆ ತೀರಿಕೊಂಡರು ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಆಸ್ಪತ್ರೆಗೆ ಹೋದ ನಂತರ ಗೊತ್ತಾಯಿತು. ಆರೋಪಿ ನಮ್ಮ ಹೆಣ್ಣು ಮಕ್ಕಳ ಮೇಲೆ ಕೆಟ್ಟ ದೃಷ್ಟಿಯಿಂದ ನೋಡುತ್ತಿರಲಿಲ್ಲ ಮತ್ತು ನನ್ನ ತಾಯಿ ಸಾವಿಗೂ ಮತ್ತು ಆರೋಪಿಗೂ ಸಂಬಂಧ ಇಲ್ಲ. ಆ ಬಗ್ಗೆ ನಾನು ಪೋಲೀಸರಿಗೆ ಹೇಳಿಕೆ ಕೊಟ್ಟಿಲ್ಲ. ಈ ಕೇಸಿನ ಬಗ್ಗೆ ನನಗೇನು ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಮತ್ತು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಪ್ರಾಜ್ಞ ಅಭಿಯೋಜಕರು ಕೋರಿದ್ದು, ಕೋರಿಕೆ ಸಕಾರಣಗಳಿಂದ ಕೂಡಿದ್ದರಿಂದ ಅದನ್ನು ಪುರಸ್ಕರಿಸಲಾಗಿದೆ ಮತ್ತು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಮತ್ತು ಪಾಟೀ ಸವಾಲು ಮಾಡಲು ಪ್ರಾಜ್ಞ ಅಭಿಯೋಜಕರಿಗೆ ಅನುಮತಿ ನೀಡಲಾಯಿತು).**

<u>ಪಾಟೀ ಸವಾಲುಃ ಅಭಿಯೋಜಕರವರಿಂದಃ</u>

ಈಗ ಓದಿ ಹೇಳಿದಂತೆ ದಿಃ 12-1-2024 ರಂದು ಪೋಲೀಸರು ನನ್ನನ್ನು ವಿಚಾರಿಸಿದಾಗ " ನಾನು ---- ಪೋಲೀಸ್ ಠಾಣೆಯಲ್ಲಿ ದೂರು ನೀಡಿದೆನು " ಎನ್ನುವ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-13 ಎಂದು ಗುರುತಿಸಲಾಯಿತು. ಸದರಿ ಹೇಳಿಕೆಯಲ್ಲಿ ಹೇಳಿರುವಂತೆ ಆರೋಪಿಯು ನಮ್ಮ ಮನೆಯ ಎದುರುಗಡೆ ಇದ್ದು ಯಾವಾಗಲೂ ನಮ್ಮ ಹೆಣ್ಣು ಮಕ್ಕಳನ್ನು ಕೆಟ್ಟ ದೃಷ್ಟಿಯಿಂದ ನೋಡುತ್ತಿದ್ದ ಆ ವಿಚಾರದಲ್ಲಿ ಕೇಳಿದಾಗ ಜಗಳ ಆಗಿ ನಮ್ಮ ಮೇಲೆ ದ್ವೇಷ ಹೊಂದಿದ್ದರು ಎಂದರೆ ಸರಿಯಲ್ಲ. ದಿಃ 12-1-2024 ರಂದು ಬೆಳಗಿನಜಾವ ನನ್ನ ತಾಯಿ ಚಾಸಾ 3 ರವರ ಜೊತೆ ಮೂತ್ರ ವಿಸರ್ಜನೆಗೆ ಹೋದಾಗ ಆರೋಪಿ ನನ್ನ ತಾಯಿಗೆ ಹಾರೆಯಿಂದ ಹೊಡೆದು ಕೊಲೆ ಮಾಡಿದ ವಿಚಾರ ನನಗೆ ಗೊತ್ತಾಗಿದ್ದು ಅದನ್ನು ತಿಳಿದುಕೊಂಡು ನಿಪಿ-13 ರಂತೆ ಹೇಳಿಕೆ ಕೊಟ್ಟಿದ್ದರೂ ಸಹ ಈಗ ಆರೋಪಿ ಜೊತೆ ರಾಜಿ ಮಾಡಿಕೊಂಡು ಕೇಸಿನಲ್ಲಿ ಆತನಿಗೆ ಸಹಾಯ ಆಗಲಿ ಎಂದು ಸುಳ್ಳು ಸಾಕ್ಷಿ ಹೇಳಲು ಬಂದಿದ್ದೇನೆ ಎಂದರೆ ಸರಿಯಲ್ಲ.

ಆರೋಪಿಯೇ ನನ್ನ ತಾಯಿಯನ್ನು ಹೊಡೆದು ಕೊಲೆ ಮಾಡಿರುವ ವಿಚಾರ ಸತ್ಯವಾಗಿದ್ದರೂ ಸಹ ಅದೇ ಸಂದರ್ಭದಲ್ಲಿ ನಾನು ಗಾಯಗೊಂಡಿದ್ದರೂ ಸಹ ಈಗ ಆರೋಪಿಯೊಂದಿಗೆ ಶಾಮಿಲಾಗಿ ಕೇಸಿನಲ್ಲಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳಲು ಬಂದಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಬಿ ಕೆ ವಕೀಲರಿಂದಃ</u>

ಪಾಟೀ ಸವಾಲು ಇಲ್ಲ ಎಂದು ಹೇಳಿದ್ದಾರೆ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು).**

ಓ. ಹೇ. ಕೆ. ಸರಿ ಇದೆ.

**1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ವಿಶೇಷ ನ್ಯಾಯಾಲಯ, ಬಳ್ಳಾರಿ.**

**1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ವಿಶೇಷ ನ್ಯಾಯಾಲಯ, ಬಳ್ಳಾರಿ**

**ಸತ್ರ ಮೊಕದ್ದಮೆ ಸಂಖ್ಯೆಃ- 30/2024**

**ಪ್ರಾಸಾಃ- 5 ಚಾಸಾಃ- 8**

| | | |
|---|---|---|
| ಸಾಕ್ಷಿಯ ಹೆಸರು | : | ಶ್ರೀಮತಿ ಈಶ್ವರಿ |
| ಗಂಡನ ಹೆಸರು | : | ಮಲ್ಲಯ್ಯ |
| ವಯಸ್ಸು | : | 31 ವರ್ಷ |
| ವೃತ್ತಿ | : | ಕೂಲಿ |
| ವಾಸಸ್ಥಳ | : | ದೇಶನೂರು ಗ್ರಾಮ |

**ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ- 18.6.2026**
**ಮುಖ್ಯ ವಿಚಾರಣೆಃ ವಿಶೇಷ ಅಭಿಯೋಜಕರಿಂದ**

ಚಾಸಾ 1 ನನ್ನ ಗಂಡ. ಚಾಸಾ 2, 4 ಮತ್ತು 5 ನನ್ನ ಗಂಡನ ಸಹೋದರರು. ಉಳಿದ ಸಾಕ್ಷಿದಾರರ ಪರಿಚಯ ಇದೆ. ಈಗ ನ್ಯಾಯಾಲಯದ ಮುಂದೆ ವಿ ಸಿ ಮೂಲಕ ಹಾಜರಾಗಿರುವ ಆರೋಪಿ ನಮ್ಮ ಊರಿನವರೇ. ನಮ್ಮ ತಾಯಿ ತಾಯವ್ವ ಈಗ ಜೀವಂತ ಇಲ್ಲ. ನಮ್ಮ ತಾಯಿ ಹೇಗೆ ತೀರಿಕೊಂಡರು ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಆಸ್ಪತ್ರೆಗೆ ಹೋದ ನಂತರ ಗೊತ್ತಾಯಿತು. ಆರೋಪಿ ನಮ್ಮ ಹೆಣ್ಣು ಮಕ್ಕಳ ಮೇಲೆ ಕೆಟ್ಟ ದೃಷ್ಟಿಯಿಂದ ನೋಡುತ್ತಿರಲಿಲ್ಲ ಮತ್ತು ನನ್ನ ತಾಯಿ ಸಾವಿಗೂ ಮತ್ತು ಆರೋಪಿಗೂ ಸಂಬಂಧ ಇಲ್ಲ. ಆ ಬಗ್ಗೆ ನಾನು ಪೋಲೀಸರಿಗೆ ಹೇಳಿಕೆ ಕೊಟ್ಟಿಲ್ಲ. ಈ ಕೇಸಿನ ಬಗ್ಗೆ ನನಗೇನು ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಮತ್ತು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಪ್ರಾಜ್ಞ ಅಭಿಯೋಜಕರು ಕೋರಿದ್ದು, ಕೋರಿಕೆ ಸಕಾರಣಗಳಿಂದ ಕೂಡಿದ್ದರಿಂದ ಅದನ್ನು ಪುರಸ್ಕರಿಸಲಾಗಿದೆ ಮತ್ತು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಮತ್ತು ಪಾಟೀ ಸವಾಲು ಮಾಡಲು ಪ್ರಾಜ್ಞ ಅಭಿಯೋಜಕರಿಗೆ ಅನುಮತಿ ನೀಡಲಾಯಿತು).**

**ಪಾಟೀ ಸವಾಲುಃ ಅಭಿಯೋಜಕರವರಿಂದಃ**

ಈಗ ಓದಿ ಹೇಳಿದಂತೆ ದಿಃ 15-1-2024 ರಂದು ಪೋಲೀಸರು ನನ್ನನ್ನು ವಿಚಾರಿಸಿದಾಗ " ನಾನು ---- ಪೋಲೀಸ್ ಠಾಣೆಯಲ್ಲಿ ದೂರು ನೀಡಿದೆನು " ಎನ್ನುವ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-14 ಎಂದು ಗುರುತಿಸಲಾಯಿತು. ಸದರಿ ಹೇಳಿಕೆಯಲ್ಲಿ ಹೇಳಿರುವಂತೆ ಆರೋಪಿಯು ನಮ್ಮ ಮನೆಯ ಎದುರುಗಡೆ ಇದ್ದು ಯಾವಾಗಲೂ ನಮ್ಮ ಹೆಣ್ಣು ಮಕ್ಕಳನ್ನು ಕೆಟ್ಟ ದೃಷ್ಟಿಯಿಂದ ನೋಡುತ್ತಿದ್ದ ಆ ವಿಚಾರದಲ್ಲಿ ಕೇಳಿದಾಗ ಜಗಳ ಆಗಿ ನಮ್ಮ ಮೇಲೆ ದ್ವೇಷ ಹೊಂದಿದ್ದರು ಎಂದರೆ ಸರಿಯಲ್ಲ. ದಿಃ 12-1-2024 ರಂದು ಬೆಳಗಿನಜಾವ ನನ್ನ ತಾಯಿ ಚಾಸಾ 3 ರವರ ಜೊತೆ ಮೂತ್ರ ವಿಸರ್ಜನೆಗೆ ಹೋದಾಗ ಆರೋಪಿ ನನ್ನ ತಾಯಿಗೆ ಹಾರೆಯಿಂದ ಹೊಡೆದು ಕೊಲೆ ಮಾಡಿದ ವಿಚಾರ ನನಗೆ ಗೊತ್ತಾಗಿದ್ದು ಅದನ್ನು ತಿಳಿದುಕೊಂಡು ನಿಪಿ-14 ರಂತೆ ಹೇಳಿಕೆ ಕೊಟ್ಟಿದ್ದರೂ ಸಹ ಈಗ ಆರೋಪಿ ಜೊತೆ ರಾಜಿ ಮಾಡಿಕೊಂಡು ಕೇಸಿನಲ್ಲಿ ಆತನಿಗೆ ಸಹಾಯ ಆಗಲಿ ಎಂದು ಸುಳ್ಳು ಸಾಕ್ಷಿ ಹೇಳಲು ಬಂದಿದ್ದೇನೆ ಎಂದರೆ ಸರಿಯಲ್ಲ.

ಆರೋಪಿಯೇ ನನ್ನ ತಾಯಿಯನ್ನು ಹೊಡೆದು ಕೊಲೆ ಮಾಡಿರುವ ವಿಚಾರ ಸತ್ಯವಾಗಿದ್ದರೂ ಸಹ ಅದೇ ಸಂಬರ್ಭದಲ್ಲಿ ನಾನು ಗಾಯಗೊಂಡಿದ್ದರೂ ಸಹ ಈಗ ಆರೋಪಿಯೊಂದಿಗೆ ಶಾಮೀಲಾಗಿ ಕೇಸಿನಲ್ಲಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳಲು ಬಂದಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಬಿ ಕೆ ವಕೀಲರಿಂದಃ

ಪಾಟೀ ಸವಾಲು ಇಲ್ಲ ಎಂದು ಹೇಳಿದ್ದಾರೆ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು).**

ಓ. ಹೇ. ಕೆ. ಸರಿ ಇದೆ.

**1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ವಿಶೇಷ ನ್ಯಾಯಾಲಯ, ಬಳ್ಳಾರಿ.**